ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ನೀರಾವರಿ ನಿಗಮಗಳಿಗೆ SCP/TSP ಕಾಮಗಾರಿಗಳ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

362 (452) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಭಾರಿ ಮತ್ತು ಮಧ್ಯಮ ನೀರಾವರಿ ವ್ಯಾಪ್ತಿಯಲ್ಲಿ ಬರುವ ನಿಗಮಗಳಾವುವು; ನಿಗಮಗಳು/ಕಂಪನಿಗಳು, ಶಾಸನಬದ್ದ ಮಂಡಳಿಗಳು, ಉದ್ದಿಮೆಗಳು, ಅಂಗ ಸಂಸ್ಥೆಗಳು ಮತು ಸೊಸೈಟಿಗಳು ಹಾಗೂ ಇತರೆ ಎಷ್ಟಿವೆ; ಯಾವುವು; (ವಿವರವಾಗಿ ಇಲಾಖೆವಾರು, ಕೇಂದ್ರ ಕಛೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು)

(ಆ) ಕಾವೇರಿ ನೀರಾವರಿ ನಿಗಮ ಮತ್ತು ವಿಶ್ವೇಶ್ವರಯ್ಯ ಜಲ ನಿಗಮದ ವ್ಯಾಪ್ತಿಗೆ ತುಮಕೂರು ಜಿಲ್ಲೆಯ ಯಾವ ಯಾವ ಪ್ರದೇಶಗಳು ಬರುತ್ತವೆ; (ತಾಲ್ಲೂಕುವಾರು/ ಹೋಬಳಿ/ಪಂಚಾಯತಿವಾರು ಮಾಹಿತಿ ನೀಡುವುದು)

(ಇ) ಈ ನಿಗಮಗಳಿಗೆ 2019-20 ನೇ ಸಾಲಿನಲ್ಲಿ ನಿರ್ಧಿಷ್ಟಪಡಿಸಿದ ಒಟ್ಟಾರೆ ಹಣವೆಷ್ಟು; ಇದರಲ್ಲಿ ಎಸ್.ಸಿ.ಪಿ/ಟಿ.ಎಸ್.ಪಿ ಕಾಮಗಾರಿಗಳಿಗೆ ಮೀಸಲಿಟ್ಟ ಅನುದಾನವೆಷ್ಟು; ಅನುದಾನವನ್ನು ನಿಗಮಗಳಿಗೆ ಈಗಾಗಲೇ ಬಿಡುಗಡೆ ಮಾಡಲಾಗಿದೆಯೇ; ಮಾಡಿಲ್ಲದಿದ್ದಲ್ಲಿ, ಅನುದಾನವನ್ನು ಯಾವ ಕಾಲಮಿತಿಯಲ್ಲಿ ಬಿಡುಗಡೆ ಮಾಡಲಾಗುವುದು; (ವಿವರವಾದ ಮಾಹಿತಿ ನೀಡುವುದು)

(ಈ) ಪ್ರಸ್ತುತ ಆರ್ಥಿಕ ವರ್ಷ ಅಂತ್ಯವಾಗುತ್ತಿದ್ದರೂ, ಇನ್ನೂ ಯಾವುದೇ ಅನುದಾನ ಬಿಡುಗಡೆ ಮಾಡದಿರುವುದರಿಂದ ಎಸ್.ಸಿ.ಪಿ/ಟಿ.ಎಸ್.ಪಿ ಕಾಮಗಾರಿಗಳಿಗೆ ಹಿನ್ನಡೆಯಾಗುವುದಿಲ್ಲವೆ ? (ವಿವರವಾದ ಮಾಹಿತಿ ನೀಡುವುದು)